ಪ್ರ-72, ಕ್ರ-96- ಉಂಪ್ರ.ಶಿಕ್ಷಣ

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ.**

**ಸೂಚನೆ:**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಲಿ ಇರುವ 1243 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ದಿನಾಂಕ:08.07.2020 ರಂದು ಅಧಿಸೂಚನೆ ಹೊರಡಿಸಲಾಯಿತು. ತದ ನಂತರ ಸದರಿ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಲಿಖಿತ ಪರೀಕ್ಷೆಯನ್ನು ನಡೆಸಲಾಗಿದೆ. ಅಂತಿಮ ಪಟ್ಟಿ ಪ್ರಕಟಿಸಿ ದಾಖಲೆಗಳ ಪರಿಶೀಲನೆ ನಡೆಸಿದ್ದರು ಇದುವರೆವಿಗೆ 2 ವರ್ಷ 5 ತಿಂಗಳು ಆಗಿದ್ದರು ಸಹ ಇದುವರೆವಿಗೆ ನೇಮಕಾತಿ ಪ್ರಕ್ರಿಯೆಯನ್ನು ಅಂತಿಮಗೊಳಿಸದೆ ವಿಳಂಬ ಧೋರಣೆ ಅನುಸರಿಸುತ್ತಿದ್ದು, ಇದರಿಂದ ಸದರಿ ಅಭ್ಯರ್ಥಿಗಳು ತೀವ್ರ ಆತಂಕಕ್ಕೆ ಒಳಗಾಗಿದ್ದಾರೆ. ಆದ್ದರಿಂದ ಅಂತಿಮ ಪಟ್ಟಿಯಲ್ಲಿ ಆಯ್ಕೆಯಾಗಿರುವ ಸಹಾಯಕ ಪ್ರಾಧ್ಯಾಪಕ ಹುದ್ದೆಗಳ ಅಭ್ಯರ್ಥಿಗಳಿಗೆ ಕೂಡಲೇ ನೇಮಕಾತಿ ಆದೇಶ ನೀಡುವ ಕುರಿತು.

**ಹೇಳಿಕೆ**

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ:ಇಡಿ/185/ಡಿಸಿಇ/2018, ದಿನಾಂಕ:03.08.2019 ರಲ್ಲಿ ಅನುಮತಿ ನೀಡಲಾಗಿರುತ್ತದೆ.

ಅದರಂತೆ, 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅಂತಿಮ ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/257/ಡಿಸಿಇ/2019(ಭಾ-3), ದಿನಾಂಕ:08.07.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ:19.10.2020 ರಲ್ಲಿ ಪ್ರಕಟಿಸಲಾಗಿದೆ.

ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರವು ದಿನಾಂಕ:26.08.2021 ರ ಸಂಖ್ಯೆ:ಇಡಿ/257/ಡಿಸಿಇ/2019 ರಲ್ಲಿ ಅಧಿಸೂಚನೆ ಹೊರಡಿಸಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:12.03.2022 ರಿಂದ 16.03.2022 ರವರೆಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿದ್ದು, ಅಭ್ಯರ್ಥಿಗಳ ತಾತ್ಕಾಲಿಕ ಮೆರಿಟ್ ಪಟ್ಟಿಯನ್ನು ದಿನಾಂಕ:18.08.2022 ರಂದು ಹಾಗೂ ಅಂತಿಮ ಮೆರಿಟ್ ಪಟ್ಟಿಯನ್ನು 30.09.2022 ರಂದು ಪ್ರಕಟಿಸಿದೆ. ಅಲ್ಲದೆ, ಮೂಲ ದಾಖಲೆಗಳ ಪರಿಶೀಲನೆಗೆ 1:3 ಅನುಪಾತದಲ್ಲಿ ಅರ್ಹರಾದ ಅಭ್ಯರ್ಥಿಗಳ ತಾತ್ಕಾಲಿಕ ಪಟ್ಟಿಯನ್ನು ದಿನಾಂಕ:05.11.2022 ರಂದು ಪ್ರಕಟಿಸಿದ್ದು, ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನಾ ಕಾರ್ಯ ಜಾರಿಯಲ್ಲಿರುತ್ತದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸರ್ಕಾರ/ಇಲಾಖೆಗೆ ಸಲ್ಲಿಸಿದ ನಂತರ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುವುದು.

ಇಡಿ 340 ಡಿಸಿಇ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು